**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ.**

**<u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 357/2022</u>**

**ಚಾ.ಸಾ-7**

**ಪ್ರಾ.ಸಾ-10**

**ಸಾಕ್ಷಿಗೆ ದಿನಾಂಕ 01-07-2026ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಲಾಳೇಮಶಾಕ |
| ತಂದೆಯ ಹೆಸರು | ಃ | ಮೊಹ್ಮದ್ ಹನೀಫ್ |
| ವಯಸ್ಸು | ಃ | 24 ವರ್ಷ |
| ಉದ್ಯೋಗ | ಃ | ಡ್ರೈವರ್ |
| ವಾಸಸ್ಥಳ | ಃ | ಇಜೇರಿ ತಾಃ ಯಡ್ರಾಮಿ |

**<u>ಮುಖ್ಯ ವಿಚಾರಣೆಃ  ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ನ್ಯಾಯಾಲಯದ ಮುಂದಿರುವ ಆರೋಪಿ ಗೊತ್ತಿಲ್ಲ. ಚಾಸಾ-1 ಗೊತ್ತಿಲ್ಲ. ಚಾಸಾ-6 ನನಗೆ ಗೊತ್ತು. ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಗೊತ್ತಿಲ್ಲ. ಮೃತ ಚಂದ್ರುಗೌಡ ಗೊತ್ತಿಲ್ಲ.

2-3 ವರ್ಷಗಳ ಹಿಂದೆ ಪೊಲೀಸ್ ಠಾಣೆಗೆ ಬೇರೆ ಕೆಲಸಕ್ಕಾಗಿ ಹೋದಾಗ ಪೊಲೀಸರ ಕೋರಿಕೆಯ ಮೆರೆಗ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ನಾನು ಸಹಿ ಮಾಡಿದಂತಹ ದಾಖಲೆಯಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಯಾವುದೇ ಕಾರನ್ನು ಜಪ್ತಿಪಡಿಸಿಕೊಂಡಿಲ್ಲ.

ಸಾಕ್ಷಿಗೆ ಕಾರ್ ಜಪ್ತಿ ಪಂಚನಾಮೆ ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸದರಿ ಜಪ್ತಿ ಪಂಚನಾಮೆಯನ್ನು ನಿಪಿ-36 ಎಂದು ಸಾಕ್ಷಿ ಸಹಿಯನ್ನು ನಿಪಿ-36(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಫೋಟೊವನ್ನು ತೋರಿಸಲಾಗಿ ಅದರಲ್ಲಿ ತಾನು ಇರುವುದಾಗಿ ನೋಡಿ ಒಪ್ಪಿಕೊಂಡಿದ್ದರಿಂದ ಸದರಿ ಫೋಟೊವನ್ನು ನಿಪಿ-37 ಎಂದು ಗುರುತಿಸಲಾಯಿತು. ಸದರಿ ಫೋಟೊ ಯಾವ ಕಾರಕ್ಕಾಣಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು

ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿಃ 24-12-2021ರಂದು ಮಧ್ಯಾಹ್ನ 12 ರಿಂದ 12-30 ಗಂಟೆವರೆಗೆ ಜೇವರ್ಗಿ ಪೊಲೀಸ್ ಠಾಣಾ ಆವರಣದಲ್ಲಿ ಪೊಲೀಸರು ನಿಮ್ಮ ಮತ್ತು ಚಾಸಾ-6ರವರ ಸಮಕ್ಷಮ ನಿಪಿ-36 ರಂತೆ ಪಂಚನಾಮೆ ಮಾಡಿ, ಕಾರ್ ನಂ.ಕೆಎ-04 ಎಂ.ಕ್ಯೂ-0557ನೇದ್ದನ್ನು ಅಪಘಾತವಾದ ವಿಚಾರವಾಗಿ ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಪಂಚನಾಮೆ ಮಾಡುವ ಸಮಯದಲ್ಲಿ ನಿಪಿ-37 ಫೋಟೊವನ್ನು ತೆಗೆದಿರುತ್ತಾರೆ ಎಂದರೆ ಗೊತ್ತಿಲ್ಲ.

ನಿಮಗೆ ಈ ಪ್ರಕರಣದ ಎಲ್ಲ ವಿಚಾರಗಳು ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರ ಪರವಾಗಿ ಸಾಕ್ಷಿಯ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ